621 (518) ಶ್ರೀ ಪ್ರಭಾಕರ ಬಂಗೇರ ಕೆ (ಬೆಳ್ತಂಗಡಿ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿ ಪಿ ಎಲ್ ಕಾರ್ಡ್ ಹೊಂದಿರುವವರಿಗೆ ಆರೋಗ್ಯ ವಿಮೆಯ ಸೌಲಭ್ಯವನ್ನು ಒದಗಿಸಲಿರುವ ಸರ್ಕಾರದ ಯೋಜನೆಯ ವಿವರಗಳೇನು?

ಆ) ಯೋಜನೆಯ ಅನುಷ್ಠಾನದ ಪ್ರಥಮ ಹಂತದಲ್ಲಿ ಈ ಸೌಲಭ್ಯವನ್ನು ವಿಸ್ತರಿಸಲು ಸರ್ಕಾರ ನಿರ್ಧರಿಸಿದೆ? ತಾಲ್ಲೂಕುಗಳಲ್ಲಿ ಆ ಕುರಿತು ವಿವರಗಳೇನು?

ಶ್ರೀ ಆರ್ ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) 2005–06 ನೇ ಸಾಲಿನಲ್ಲಿ ರಾಜ್ಯದಲ್ಲಿ ಸ್ತ್ರೀಶಕ್ತಿ ಗುಂಪುಗಳಿಗೆ ಸಂಬಂಧ ಪಟ್ಟ ಹಾಗೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಹಾಗೂ ಇತರ ಬಿಪಿಎಲ್ ಕೆಳಗೆ ಇರುವ ಕುಟುಂಬಗಳಿಗೆ ಭಾರತ ಸರ್ಕಾರ ಅನುಷ್ಠಾನಗೊಳಿಸುತ್ತಿರುವ ಯುನಿವರ್ಸಲ್ ಹೆಲ್ತ್ ಇನ್ಷೂರೆನ್ಸ್ ಸ್ಕೀಂ ಅನ್ನು ಜಾರಿಗೆ ತರುವ ಉದ್ದೇಶದಿಂದ 51,245 ಕುಟುಂಬಗಳನ್ನು ನೊಂದಾಯಿಸಲಾಗಿರುತ್ತದೆ ರಾಜ್ಯದಲ್ಲಿ ಗುರುತಿಸಲಾಗಿರುವ ಆಸ್ಪತ್ರೆಗಳಲ್ಲಿ ಈ ಕುಟುಂಬಗಳ ಸದಸ್ಯರು ಈ ಯೋಜನೆಯ ಲಾಭವನ್ನು ಪಡೆಯಬಹುದಾಗಿದೆ ಇದೇ ಆಧಾರದ ಮೇಲೆ 2006–07ನೇ ಸಾಲಿನಲ್ಲಿ ಸುವರ್ಣ ಸುರಕ್ಷಾ ಆರೋಗ್ಯ ವಿಮಾ ಯೋಜನೆಯನ್ನು ರಾಜ್ಯದ ಭೂ ರಹಿತ ಕೃಷಿ ಕಾರ್ಮಿಕರಿಗೆ ಒದಗಿಸಲು ಯೋಜಿಸಲಾಗಿದೆ ಇದಕ್ಕಾಗಿ ಆಯವ್ಯಯದಲ್ಲಿ 35 ಕೋಟಿ ರೂ ಗಳನ್ನು ಒದಗಿಸಲಾಗಿದೆ

ಆ) ಹೌದು ಪ್ರಾರಂಭಿಕ ಹಂತದಲ್ಲಿ ಪ್ರಯೋಗಿಕವಾಗಿ ಸುಮಾರು 50 ಆಯ್ದ ತಾಲ್ಲೂಕುಗಳಲ್ಲಿ ಈ ಯೋಜನೆಯನ್ನು ಜಾರಿಗೆ ತರಲು ಯೋಜಿಸಲಾಗಿದೆ ಪ್ರತಿ ಕುಟುಂಬದ ಸದಸ್ಯರಿಗೆ ವಿಮಾ ವಂತಿಗೆ ಹಣ ರೂ 548/– ಆಗಿದ್ದು ಇದರಲ್ಲಿ 300 ರೂ ಗಳನ್ನು ಭಾರತ ಸರ್ಕಾರವೂ ಉಳಿದ ಹಣವನ್ನು ಕರ್ನಾಟಕ ಸರ್ಕಾರವೂ ಭರಿಸುತ್ತದೆ ಗರಿಷ್ಠ ರೂ 30,000/– ದವರೆಗೆ ಆರೋಗ್ಯ ಸೌಲಭ್ಯಗಳನ್ನು ಪಡೆಯಬಹುದಾಗಿದೆ

622 (519) ಶ್ರೀ ಪ್ರಭಾಕರ ಬಂಗೇರ ಕೆ (ಬೆಳ್ತಂಗಡಿ) ಮಾನ್ಯ ಕಾರ್ಮಿಕ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳ್ತಂಗಡಿ ತಾಲ್ಲೂಕು ಮಾಲಾಡಿ ಎಂಬಲ್ಲಿರುವ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಸಿಬ್ಬಂದಿ ಕೊರತೆ ಹಾಗೂ ಕಟ್ಟಡ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹೌದಾದಲ್ಲಿ, ಸರ್ಕಾರದ ವಿಳಂಬ ನೀತಿಗೆ ಕಾರಣಗಳೇನು?

ಇ) ಸಿಬ್ಬಂದಿಯ ಕೊರತೆಯಿಂದಾಗಿ ಶಿಕ್ಷಣ ಸಂಸ್ಥೆಯನ್ನು ನಡೆಸಲು ತೊಂದರೆಯುಂಟಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ, ಕೂಡಲೇ ಸಿಬ್ಬಂದಿ ನೇಮಕಾತಿಗೆ ಸರ್ಕಾರ ಕ್ರಮ ಕೈಗೊಳ್ಳುವುದೇ?

ಈ) ತರಬೇತಿ ಸಂಸ್ಥೆಗೆ ಕಟ್ಟಡ ನಿರ್ಮಾಣವನ್ನು ಯಾವಾಗ ಆರಂಭಿಸಲಾಗುವುದು? ಇದಕ್ಕಾಗಿ ಮಂಜೂರಾದ ಅನುದಾನವೆಷ್ಟು? (ವಿವರ ಒದಗಿಸುವುದು)

ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು)

ಅ) ಹೌದು

ಆ) ಈಗಾಗಲೇ ಅಗತ್ಯ ಸಿಬ್ಬಂದಿಯನ್ನು ನೇಮಕ ಮಾಡಲಾಗಿದೆ ಹಾಗೂ ಕಟ್ಟಡ ನಿರ್ಮಾಣಕ್ಕಾಗಿ ಪ್ರಸ್ತಕ ಸಾಲಿನಲ್ಲಿ ರೂ 125 00 ಲಕ್ಷ ಅನುದಾನ ಬಿಡುಗಡೆ ಮಾಡಲಾಗಿದೆ

ಇ) ಹೌದು ಈಗಾಗಲೇ ಅಗತ್ಯ ಸಿಬ್ಬಂದಿಯನ್ನು ನೇಮಕಾತಿ ಮಾಡಲಾಗಿದೆ

ಈ) ಪ್ರಸಕ್ತ ಸಾಲಿನಲ್ಲಿ ಕಟ್ಟಡ ನಿರ್ಮಾಣಕ್ಕಾಗಿ ರೂ 125 00 ಲಕ್ಷ ಅನುದಾನ ಬಿಡುಗಡೆ ಮಾಡಲಾಗಿದೆ ಲೋಕೋಪಯೋಗಿ ಇಲಾಖೆ ಕ್ರಮ ವಹಿಸಬೇಕಾಗಿದೆ

623 (879) ಶ್ರೀ ರಘುಪತಿ ಭಟ್ ಕೆ (ಉಡುಪಿ) ಮಾನ್ಯ ಕಾರ್ಮಿಕ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೇಂದ್ರ ಸರ್ಕಾರವು 2000ನೇ ಇಸವಿಯಲ್ಲಿ ರಾಷ್ಟ್ರವ್ಯಾಪಿ "ಮನಿಸಾನ ವೇತನ" ಆಯೋಗದ ಶಿಫಾರಸ್ಸಿನ ಮೂಲಕ ಪತ್ರಕರ್ತರ ಮತ್ತು ಪತ್ರಕೇತರ ನೌಕರರ ವೇತನ ಪರಿಷ್ಕರಣೆಗೆ ಕ್ರಮ ಕೈಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಹೌದಾದಲ್ಲಿ, ರಾಜ್ಯದ ಎಷ್ಟು ಪತ್ರಿಕಾ ಸಂಸ್ಥೆಗಳು ತಮ್ಮ ನೌಕರರಿಗೆ ಸದರಿ ವೇತನ ಪರಿಷ್ಕರಣಾ ಸೌಲಭ್ಯವನ್ನು ಜಾರಿಗೊಳಿಸಿವೆ?

ಇ) ಜಾರಿಗೊಳಿಸಲಾದ ಸಂಸ್ಥೆಗಳು ಯಾವುದು?

ಈ) ಮಣಿಪಾಲದ ಉದಯವಾಣಿ ಪತ್ರಿಕೆ ತನ್ನ ನೌಕರರಿಗೆ ಸದರಿ ಸೌಲಭ್ಯವನ್ನು ಜಾರಿಗೊಳಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?